# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :2107
ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 25.03.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಸಾರಿಗೆ ನಿಗಮಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; ಸಾರಿಗೆ ನೌಕರರ ವೇತನ ಬಾಕಿ ಇದೆಯೇ; ಬಾಕಿ ಇದ್ದಲ್ಲಿ, ಎಷ್ಟು ತಿಂಗಳ ವೇತನ ಬಾಕಿ ಉಳಿದಿದೆ; ಯಾವ ಕಾಲಮಿತಿಯೊಳಗೆ ಸರ್ಕಾರ ವೇತನ ನೀಡಲಾಗುವುದು; (ಸಂಪೂರ್ಣ ಮಾಹಿತಿ ನಿಗಮವಾರು ನೀಡುವುದು) | ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿ ಕಳೆದ 05 ವರ್ಷಗಳಲ್ಲಿ ನಿಗಮಗಳಿಗೆ ಬಿಡುಗಡೆಯಾದ ಅನುದಾನದ ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ.<br><br>ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ಅಧಿಕಾರಿ/ಸಿಬ್ಬಂದಿಗಳಿಗೆ ನಿಗದಿತ ಅವಧಿಯಲ್ಲಿ ವೇತನ ಪಾವತಿಸಲಾಗುತ್ತಿದೆ. ಯಾವುದೇ ವೇತನವು ಪಾವತಿಗೆ ಬಾಕಿಯಿರುವುದಿಲ್ಲ. |
| ಆ. | ರಾಜ್ಯದಲ್ಲಿ ಸಾರಿಗೆ ಇಲಾಖೆಯಿಂದ ಸ್ಕ್ರ್ಯಾಪ್ ಮಾಡಲಾದ ಬಸ್‌ಗಳ ಸಂಖ್ಯೆ ಎಷ್ಟು; ಕಳೆದ 2 ವರ್ಷಗಳಲ್ಲಿ ಖರೀದಿಸಿದ ಬಸ್‌ಗಳ ಸಂಖ್ಯೆ ಎಷ್ಟು; (ನಿಗಮವಾರು ಮಾಹಿತಿ ನೀಡುವುದು) | ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ಕಳೆದ 05 ವರ್ಷಗಳಲ್ಲಿ ನಿರುಪಯುಕ್ತಗೊಳಿಸಿರುವ ಬಸ್‌ಗಳ ವರ್ಷವಾರು ವಿವರ ಈ ಕೆಳಗಿನಂತಿದೆ. |

| ವರ್ಷ | ಒಟ್ಟು ವಾಹನಗಳ ಸಂಖ್ಯೆ | | | | |
|---|---|---|---|---|---|
| | ಕರಾರಸಾ | ಬೆಂಮನಸಾ | ವಾಕರಾಸಾ | ಕಕರಾಸ | ಒಟ್ಟು |
| 2020-21 | 541 | 168 | 205 | 113 | **1027** |
| 2021-22 | 75 | 317 | 76 | 116 | **584** |
| 2022-23 | 128 | 438 | 29 | 146 | **741** |
| 2023-24 | 205 | 782 | 128 | 133 | **1248** |
| 2024-25 | 368 | 739 | 224 | 226 | **1557** |
| 2025-26 (23-03-26 ರ ಅಂತ್ಯಕ್ಕೆ) | 410 | 178 | 289 | 175 | **1052** |
| ಒಟ್ಟು | **1727** | **2622** | **951** | **909** | **6209** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ. | ರಾಜ್ಯದಲ್ಲಿ 10 ಲಕ್ಷ ಕಿಮೀ ಚಲಾವಣೆಯಾಗಿದ್ದರು ಸಹ ಬಸ್ ಸ್ಕ್ರ್ಯಾಪ್ ಮಾಡದೇ ಹಳ್ಳಿಗಳಿಗೆ ಚಲಾವಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ: ಸ್ಕ್ರ್ಯಾಪ್ ಮಾಡದೇ ಇರಲು ಸೂಕ್ತ ಕಾರಣವೇನು; | ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: GSR 29 (E), ದಿನಾಂಕ:16.01.2023ರನ್ವಯ ಹಾಗೂ ರಾಜ್ಯ ಸರ್ಕಾರದ ನಿರ್ದೇಶನದನುಸಾರ ಸಾರಿಗೆ ನಿಗಮಗಳ ಬಸ್‌ಗಳನ್ನು ನಿರುಪಯುಕ್ತಗೊಳಿಸಲು 15 ವರ್ಷ ವಯೋಮಾನವನ್ನು ನಿಗದಿಪಡಿಸಿದ್ದು, ಅದರಂತೆ ಕ್ರಮ ವಹಿಸಲಾಗುತ್ತಿರುವುದರಿಂದ ಅವಧಿ ಮೀರಿರುವ ಬಸ್‌ಗಳು ಯಾವುದು ಕಾರ್ಯಾಚರಣೆಯಲ್ಲಿರುವುದಿಲ್ಲ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|

ರಾಜ್ಯದ ನಾಲ್ಕು ಸಾರಿಗೆ ನಿಗಮಗಳಲ್ಲಿ ಎಲ್ಲಾ ಬಸ್ಸುಗಳಲ್ಲಿ ಮೂಲ ಉತ್ಪಾದಕರ ಶಿಫಾರಸ್ಸಿನಂತೆ ಕಾಲಕಾಲಿಕ ನಿರ್ವಹಣೆಗಳನ್ನು ಕೈಗೊಂಡು, ಪ್ರಾದೇಶಿಕ ಸಾರಿಗೆ ಕಛೇರಿ ಇವರಿಂದ ಅರ್ಹತಾ ನವೀಕರಣ ಪತ್ರ ಪಡೆದು ಮತ್ತು ತಾಂತ್ರಿಕ ದೋಷಗಳಿಂದ ಕೆಟ್ಟು ನಿಲ್ಲುತ್ತಿರುವುದನ್ನು ತಡೆಗಟ್ಟಲು ನಿಗದಿತ ಸಮಯಕ್ಕೆ ದೈನಂದಿನ, ವಾರಾಂತ್ಯ ಮತ್ತು ಡಾಕಿಂಗ್ ನಿರ್ವಹಣೆಗಳನ್ನು ಕಟ್ಟುನಿಟ್ಟಾಗಿ ನಿರ್ವಹಿಸುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ಸುಸ್ಥಿತಿಯಲ್ಲಿರುವ ಬಸ್ಸುಗಳನ್ನು ಮಾತ್ರ ಕಾರ್ಯಾಚರಣೆ ಮಾಡಲಾಗುತ್ತಿದೆ.

ಮುಂದುವರೆದು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಯಾಂತ್ರಿಕ ಇಲಾಖೆಯಿಂದ ಹೊರಡಿಸಿರುವ ಸುತ್ತೋಲೆ ಸಂಖ್ಯೆ:810/2023, ದಿನಾಂಕ:23.09.2023ರನ್ವಯ ನಿಗಮದಲ್ಲಿನ ಬಸ್‌ಗಳನ್ನು ನಿಷ್ಕ್ರಿಯಗೊಳಿಸಲು ಸೂಚಿಸಿರುವ ಮಾನದಂಡಗಳನ್ನು ಅನುಸರಿಸಲಾಗುತ್ತಿರುತ್ತದೆ.

ಇದಲ್ಲದೆ, ಹೆಚ್ಚಿನ ಕಿ.ಮೀ. ಕ್ರಮಿಸಿರುವ ವಾಹನಗಳ, ಭೌತಿಕ ಹಾಗೂ ತಾಂತ್ರಿಕ ಸ್ಥಿತಿಗಳನ್ನಾಧರಿಸಿ ಬಸ್ಸುಗಳನ್ನು ನಿಷ್ಕ್ರಿಯಗೊಳಿಸಲು ಅನುಮತಿಸಲಾಗುತ್ತಿರುತ್ತದೆ. ಮಿತಿಗಿಂತ ಹೆಚ್ಚಿನ ಕಿ.ಮೀ. ಕ್ರಮಿಸಿ, ತಾಂತ್ರಿಕವಾಗಿ ಸುಸ್ಥಿತಿಯಲ್ಲಿರುವ ಬಸ್‌ಗಳಿಗೆ ಅವಶ್ಯವಿದ್ದಲ್ಲಿ ಕವಚ ಪುನಶ್ಚೇತನ ಕಾರ್ಯಗಳನ್ನು ಕೈಗೊಂಡು ಕಾರ್ಯಾಚರಣೆಗೊಳಿಸಲಾಗುತ್ತಿದೆ.

**ನಾಲ್ಕು ಸಾರಿಗೆ ಸಂಸ್ಥೆಗಳಿಂದ 2023-24ರ ಪೂರ್ವದ 04 ವರ್ಷಗಳಲ್ಲಿ ಹೊಸ ಬಸ್‌ಗಳನ್ನು ಖರೀದಿಸಿರಲಿಲ್ಲ.**

ರಾಜ್ಯದ ನಾಲ್ಕು ರಸ್ತೆ ಸಾರಿಗೆ ನಿಗಮ/ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿ 2023-24 ರಿಂದ 2025-26ರವರೆಗೆ ಖರೀದಿಸಿರುವ/ ಖರೀದಿ ಹಂತದಲ್ಲಿರುವ ಹೊಸ ಬಸ್ಸುಗಳ ವಿವರ ಕೆಳಕಂಡಂತಿದೆ:

<table>
<tr><th>ಸಂಸ್ಥೆಗಳು</th><th>2023-24 (Jan)</th><th>2024-25</th><th>2025-26</th><th>ಒಟ್ಟು</th></tr>
<tr><td>ಕ.ರಾ.ರ.ಸಾ. ನಿಗಮ</td><td>510</td><td>698</td><td>10+60* +45**</td><td>1323</td></tr>
<tr><td rowspan="2">ಬೆಂ.ಮ.ಸಾ. ಸಂಸ್ಥೆ</td><td>20 ಡೀಸೆಲ್</td><td>820 ಡೀಸೆಲ್</td><td>-</td><td rowspan="2">2365</td></tr>
<tr><td>341 ಇ.ವಿ</td><td>755 ಇ.ವಿ</td><td>429 ಇ.ವಿ</td></tr>
<tr><td>ವಾ.ಕ.ರ.ಸಾ. ಸಂಸ್ಥೆ</td><td>296</td><td>560</td><td>11+ 354***</td><td>1221</td></tr>
<tr><td>ಕ.ಕ.ರ.ಸಾ. ನಿಗಮ</td><td>720</td><td>307</td><td>146</td><td>1173</td></tr>
<tr><td>ಒಟ್ಟು</td><td>1887</td><td>3140</td><td>1055</td><td>6082</td></tr>
</table>

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | *ಪ್ರಸಕ್ತ 2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ 60 ನಾನ್ ಎ.ಸಿ. ಸ್ಲೀಪರ್ ಬಸ್‌ಗಳಿಗೆ ಕೇಂದ್ರ ಖರೀದಿ ಆದೇಶ ನೀಡಲಾಗಿದ್ದು, ಸದರಿ ಬಸ್ಸುಗಳನ್ನು ಮಾರ್ಚ್-2026ರ ಅಂತ್ಯದೊಳಗೆ ಸೇರ್ಪಡೆಗೊಳಿಸಲಾಗುವುದು.<br>** ನಿಗಮಕ್ಕೆ 45 ಸಂಖ್ಯೆಯ ಕರ್ನಾಟಕ ಸಾರಿಗೆ ಮಾದರಿಯ ಬಸ್ಸುಗಳನ್ನು ಮಾರ್ಚ್-2026ರ ಅಂತ್ಯದೊಳಗೆ ಸೇರ್ಪಡೆಗೊಳಿಸಲಾಗುವುದು.<br>***ಪ್ರಸಕ್ತ 2025-26ನೇ ಸಾಲಿನಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ 354 ಹೊಸ ಬಸ್‌ಗಳನ್ನು ಖರೀದಿಸಲು ಖರೀದಿ ಆದೇಶ ನೀಡಿದ್ದು, ಸದರಿ ಬಸ್‌ಗಳನ್ನು ಮಾರ್ಚ್-2026ರ ಅಂತ್ಯದೊಳಗೆ ಸೇರ್ಪಡೆಗೊಳಿಸಲಾಗುವುದು.<br>ಮುಂದುವರೆದು, ಈಗಾಗಲೇ ಟೆಂಡರ್ ಪ್ರಕ್ರಿಯೆ ಅಂತಿಮಗೊಂಡಿದ್ದು, ಮಾರ್ಚ್-2026ರ ನಂತರ ಸಾರಿಗೆ ನಿಗಮಗಳಿಗೆ ಸೇರ್ಪಡೆಗೊಳ್ಳಲಿರುವ ಒಟ್ಟು ಬಸ್‌ಗಳು ವಿವರ ಕೆಳಕಂಡಂತಿರುತ್ತದೆ: |

| ಸಂಸ್ಥೆ/ನಿಗಮ | ಬಸ್‌ಗಳ ಸಂಖ್ಯೆ | ಬಸ್‌ಗಳ ವಿವರ |
|---|---|---|
| ಕ.ರಾ.ರ.ಸಾ.ನಿಗಮ | 644 | 500 ಗ್ರಾಮಾಂತರ+ 144 ಡಬಲ್ ಡೋರ್ (ನಗರ) |
| ವಾ.ಕ.ರ.ಸಾ.ಸಂಸ್ಥೆ | 150 | ಗ್ರಾಮಾಂತರ ಬಸ್‌ಗಳು |
| ಕ.ಕ.ರ.ಸಾ.ನಿಗಮ | 56 | ವಿವಿಧ ರೀತಿಯ ಪ್ರೀಮಿಯಂ ಬಸ್‌ಗಳು |
| ಒಟ್ಟು | 850 | |

- 2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 469(iii)ರಲ್ಲಿ ರಾಜ್ಯದ ವಿವಿಧ ಸಾರಿಗೆ ನಿಗಮಗಳಿಗೆ 2000 ಸಂಖ್ಯೆಯ ಹೊಸ ಡೀಸೆಲ್ ಬಸ್ಸುಗಳನ್ನು ಸೇರ್ಪಡೆಗೊಳಿಸಲಾಗುವುದು ಎಂದು ಘೋಷಿಸಿದ್ದು, ಅದರನ್ವಯ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ 900, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ 700 ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ 400ರಂತೆ, ಒಟ್ಟು 2000 ಸಂಖ್ಯೆಯ ಹೊಸ ಬಿ.ಎಸ್-VI ಡೀಸೆಲ್ ಬಸ್ಸುಗಳನ್ನು ಹಂಚಿಕೆ ಮಾಡಲಾಗಿದೆ.

ಅದರಲ್ಲಿ ಈಗಾಗಲೇ 300 ಡೀಸೆಲ್ ಬಸ್ಸುಗಳನ್ನು ರೂ.12353.00 ಲಕ್ಷಗಳ ಅನುದಾನದಲ್ಲಿ ಖರೀದಿಸಲು ಸರ್ಕಾರದ ಆದೇಶ ಸಂಖ್ಯೆ: ಟಿಡಿ 21 ಟಿಸಿಬಿ 2025, ದಿನಾಂಕ:21.04.2025 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸರ್ಕಾರದಿಂದ ನೀಡಿದ ರೂ.123.53 ಕೋಟಿ ಅನುದಾನದಲ್ಲಿ 330 ಬಸ್ಸುಗಳನ್ನು ಖರೀದಿಸಲು ಖರೀದಿ ಆದೇಶ ನೀಡಲಾಗಿದ್ದು, ಮಾರ್ಚ್-2026ರೊಳಗೆ ಎಲ್ಲಾ ಬಸ್‌ಗಳು ನಿಗಮಕ್ಕೆ ಸೇರ್ಪಡೆಗೊಳ್ಳಲಿವೆ.

ಮುಂದುವರೆದು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ 500 ಹಾಗೂ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ 150 ಸಂಖ್ಯೆಯ ಪೂರ್ಣ ನಿರ್ಮಿತ ಬಿ.ಎಸ್-VI ಕರ್ನಾಟಕ Mofussil ಸಾರಿಗೆ ಬಸ್ಸುಗಳನ್ನು ಖರೀದಿಸಲು ಸರ್ಕಾರದ ಆದೇಶ ಸಂಖ್ಯೆ: ಟಿಡಿ 33

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಟಿಸಿಬಿ 2025, ದಿನಾಂಕ: 30.01.2026ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಈ ಕುರಿತು ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿರುತ್ತದೆ. ಉಳಿದ 620 ಬಸ್ಸುಗಳಿಗೆ ಅನುದಾನ ನೀಡುವಂತೆ ಕೋರಿರುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ 400 ಬಸ್ಸುಗಳನ್ನು ಹಂಚಿಕೆ ಮಾಡಲಾಗಿದ್ದು, ಸದರಿ ಬಸ್ಸುಗಳ ಖರೀದಿಗೆ ಅನುದಾನ ಮಂಜೂರಾತಿ ಕೋರಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅನುದಾನ ನಿರೀಕ್ಷಿಸಲಾಗಿದೆ.<br>• ಕೇಂದ್ರ ಸರ್ಕಾರದ PM e-sewa ಯೋಜನೆಯಡಿಯಲ್ಲಿ ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ ಮತ್ತು ಕ.ಕ.ರ.ಸಾ.ನಿಗಮಗಳಿಗೆ ಒಟ್ಟು 750 ವಿದ್ಯುತ್ ಚಾಲಿತ ಬಸ್ಸುಗಳು ಮತ್ತು PM e-drive ಯೋಜನೆಯಡಿ ಬೆಂ.ಮ.ಸಾ.ಸಂಸ್ಥೆಗೆ 4500 ವಿದ್ಯುತ್ ಚಾಲಿತ ಬಸ್ಸುಗಳನ್ನು GCC ಮಾದರಿಯಲ್ಲಿ ಆಚರಣೆ ಮಾಡಲು ಮಂಜೂರಾತಿ ದೊರೆತಿದ್ದು, ಮುಂದಿನ ದಿನಗಳಲ್ಲಿ ಸೇರ್ಪಡೆಗೊಳಿಸಲು ಯೋಜಿಸಲಾಗಿರುತ್ತದೆ.<br>• 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 480 ರಲ್ಲಿ ನಾಲ್ಕು ಸಾರಿಗೆ ನಿಗಮಗಳಿಗೆ 1000 ಡೀಸೆಲ್ ಬಸ್‌ಗಳನ್ನು ಒದಗಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ. |
| ಈ. | ಸಾರಿಗೆ ವಾಹನಗಳ ಮೇಲೆ ತಂಬಾಕು ಉತ್ಪನ್ನಗಳ ಜಾಹಿರಾತುವಿನ ಬದಲಿಗೆ ಸಾರಿಗೆ ಬಸ್ ಒಳಬದಿಯಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಮಾಹಿತಿ ಮತ್ತು ಭಾವಚಿತ್ರವನ್ನು ಲಗತ್ತಿಸುವ ಬಗ್ಗೆ ಸರ್ಕಾರ ಚಿಂತಿಸಿದೆಯೇ? | ನಾಲ್ಕು ಸಾರಿಗೆ ನಿಗಮ/ ಸಂಸ್ಥೆಗಳ ಬಸ್ಸುಗಳ ಮೇಲೆ ಜಾಹೀರಾತು ಪ್ರದರ್ಶನಕ್ಕಾಗಿ ನಿಗಮದ ನಿಯಮಾವಳಿಗಳನ್ವಯ ಟೆಂಡರ್ ಮೂಲಕ ಪರವಾನಗಿದಾರರನ್ನು ಆಯ್ಕೆ ಮಾಡಲಾಗುತ್ತದೆ. ನಿಗಮ/ಸಂಸ್ಥೆಗಳ ಬಸ್‌ಗಳ ಮೇಲೆ ತಂಬಾಕು ಉತ್ಪನ್ನಗಳ ಜಾಹೀರಾತುಗಳನ್ನು ಪ್ರದರ್ಶಿಸಲು ನಿಗಮದ ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ.<br>ಆದಾಗ್ಯೂ, ಸಾರ್ವಜನಿಕರ ಹಿತದೃಷ್ಟಿಯಿಂದ ಸಂಸ್ಥೆಯ ಬಸ್ ಮತ್ತು ಬಸ್ ನಿಲ್ದಾಣಗಳಲ್ಲಿ ಈಗಾಗಲೇ ಅಳವಡಿಸಿದ ಜಾಹೀರಾತುಗಳಲ್ಲಿ ತಂಬಾಕು ಉತ್ಪನ್ನಗಳ ಸೇವನೆಗೆ ಪ್ರಚೋದಿಸುವಂತಹ **ಪರೋಕ್ಷವಾದ** ಜಾಹೀರಾತುಗಳನ್ನು ಗಮನಕ್ಕೆ ಬಂದ ಕೂಡಲೇ ತೆರವುಗೊಳಿಸಲಾಗಿದೆ. ಇನ್ನು ಮುಂದೆ ಈ ರೀತಿಯ ಜಾಹೀರಾತುಗಳನ್ನು ಪ್ರದರ್ಶಿಸದಂತೆ ಎಲ್ಲಾ ಪರವಾನಗಿದಾರರಿಗೆ ಕಠಿಣ ನಿರ್ದೇಶನ ನೀಡಲಾಗಿರುತ್ತದೆ.<br>ಮುಂದುವರೆದು, ನಾಲ್ಕು ಸಾರಿಗೆ ನಿಗಮ/ಸಂಸ್ಥೆಗಳ ಬಸ್ ಗಳ ಒಳಬದಿಯಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಮಾಹಿತಿ ಮತ್ತು ಭಾವಚಿತ್ರವನ್ನು ಪ್ರದರ್ಶಿಸುವ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಟಿಡಿ 144 ಟಿಸಿಕ್ಯೂ 2026

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು

ಅನುಬಂಧ

**Grants Allocated and Releases details**

(In LAKHS)

| | KSRTC | | BMTC | | NWKRTC | | KKRTC | | TOTAL | |
|---|---|---|---|---|---|---|---|---|---|---|
| **YEAR** | **GRANTS ALLOCATED** | **GRANTS RELEASED** | **GRANTS ALLOCATED** | **GRANTS RELEASED** | **GRANTS ALLOCATED** | **GRANTS RELEASED** | **GRANTS ALLOCATED** | **GRANTS RELEASED** | **GRANTS ALLOCATED** | **GRANTS RELEASED** |
| **2021-22** | 67,613.96 | 67,613.96 | 1,25,444.58 | 1,25,444.58 | 33,653.96 | 33,532.95 | 25,967.26 | 25,967.26 | **2,52,679.76** | **2,52,558.75** |
| **2022-23** | 1,03,739.38 | 1,03,739.38 | 1,48,283.32 | 1,48,283.32 | 1,04,910.50 | 1,04,910.50 | 49,256.03 | 49,256.03 | **4,06,189.23** | **4,06,189.23** |
| **2023-24** | 1,60,219.76 | 1,60,219.76 | 1,43,076.16 | 1,22,733.03 | 1,21,493.39 | 1,21,493.39 | 87,588.32 | 87,588.32 | **5,12,377.63** | **4,92,034.50** |
| **2024-25** | 2,51,054.83 | 2,50,368.83 | 1,54,784.31 | 1,52,272.79 | 1,69,407.29 | 1,69,407.29 | 1,32,573.75 | 1,32,573.75 | **7,07,820.18** | **7,04,622.66** |
| **2025-26 (Feb-26)** | 2,49,645.64 | 2,21,408.62 | 1,40,715.15 | 1,20,022.97 | 1,60,424.68 | 1,45,513.52 | 1,21,882.56 | 1,11,384.89 | **6,72,668.03** | **5,98,330.00** |

***NOTE: GRANTS INCLUDED STUDENT PASS, OTHER PASSES & SHAKTHI REIMBURSEMENT**